16217

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ –ಎಂಎಂಎನ್/538/2021

ಕರ್ನಾಟಕ ಸರ್ಕಾರದ ಸಚಿವಾಲಯ
1ನೇ ಮಹಡಿ, ವಿಕಾಸ ಸೌಧ,
ಬೆಂಗಳೂರು, ದಿನಾಂಕ 21.01.2022.

**ಇವರಿಂದ:**
ಸರ್ಕಾರದ ಕಾರ್ಯದರ್ಶಿ,
(ಎಂ.ಎಸ್.ಎಂ.ಇ ಮತ್ತು ಗಣಿ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

Office of the Director
Dept. of Mines & Geology
25 JAN 2022
Bengaluru - 560001.

ಆಪ್ತ ಶಾಖೆ
ನಂ: 6271 ದಿ 29/1/22

**ಇವರಿಗೆ:**
ನಿರ್ದೇಶಕರು,
ಗಣಿ ಮತ್ತು ಭೂವಿಜ್ಞಾನ ಇಲಾಖೆ,
ಖನಿಜ ಭವನ, ಬೆಂಗಳೂರು-560 001.

ಮಾನ್ಯರೆ,

**ವಿಷಯ :** ಶ್ರೀ ಶಿವಶಂಕರಸ್ವಾಮಿ ಎಂ.ಜಿ. ಇವರು ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕು, ಅರಕೆರೆ ಗ್ರಾಮದ ಸ.ನಂ.180ರಲ್ಲಿ 03ಎಕರೆ-32ಗುಂಟೆ ಪ್ರದೇಶದಲ್ಲಿ ಕಟ್ಟಡ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿರುವ ಅರ್ಜಿ (Saved Application) ಕುರಿತು.

DD(MA)

**ಉಲ್ಲೇಖ:** 1. ತಮ್ಮ ಪತ್ರ ಸಂಖ್ಯೆ ಗಭೂಇ/ಉನಿ(ಖ.ಅ)/ಕಗಗು/Saved Application/AQL-49/2021-22/1162, ದಿನಾಂಕ 28.09.2021.
2. ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಐ 319 ಎಂಎಂಎನ್ 2016(1), ದಿನಾಂಕ 18.11.2016.

****

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಪರಿಶೀಲಿಸಲಾಯಿತು. ಅದರಂತೆ ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2017ರ ನಿಯಮ 8-B(2)(d-1) ಮತ್ತು ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2020ರ ನಿಯಮ 8-B(2)(e) ರನ್ವಯ ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಗಣಿಸಿದೆ.

ಅಂತೆಯೇ, ಉಲ್ಲೇಖ(2)ರ ಅಧಿಸೂಚನೆಯಂತೆ ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2016ರ ನಿಯಮ 16 ರನ್ವಯ ನಿರ್ದಿಷ್ಟವಲ್ಲದ ಉಪ ಖನಿಜಗಳ ಗಣಿ ಗುತ್ತಿಗೆ ಮಂಜೂರಾತಿಗೆ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು / ಹಿರಿಯ ಭೂವಿಜ್ಞಾನಿಯವರು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ.

--2

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಉಲ್ಲೇಖ (1) ರ ಪ್ರಸ್ತಾವನೆಯನ್ನು ಸರ್ಕಾರವು ಪರಿಗಣಿಸಿರುವುದರಿಂದ, ಅರ್ಜಿತ ಪ್ರದೇಶಕ್ಕೆ ನಿಯಮಾನುಸಾರದ ಸಾಮಾನ್ಯ ಷರತ್ತು ಹಾಗೂ ನಿಬಂಧನೆಗಳನ್ನು ವಿಧಿಸಿ, ಸದರಿ ಕಟ್ಟಡಕಲ್ಲು ಗಣಿ ಗುತ್ತಿಗೆಯನ್ನು ಅರ್ಜಿದಾರರಿಗೆ ಮಂಜೂರು ಮಾಡುವ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸುವಂತೆ ಹಾಗೂ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

**(ಶಿವಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಗಣಿ).

**ಪ್ರತಿಗಳನ್ನು:**

1. ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ, ಹಾಸನ ಜಿಲ್ಲೆ, ಹಾಸನ.
2. ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗ, ಹಾಸನ ಜಿಲ್ಲೆ, ಹಾಸನ.
3. ಉಪ ವಿಭಾಗಾಧಿಕಾರಿ, ಹಾಸನ ವಿಭಾಗ, ಹಾಸನ ಜಿಲ್ಲೆ, ಹಾಸನ.
4. ಹಿರಿಯ ಭೂವಿಜ್ಞಾನಿ, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಹಾಸನ ಜಿಲ್ಲೆ, ಹಾಸನ.
5. ತಹಸೀಲ್ದಾರ್, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ.
6. ಶ್ರೀ ಶಿವಶಂಕರಸ್ವಾಮಿ ಎಂ.ಜಿ. ಬಿನ್ ಗುರುಸಿದ್ದಪ್ಪ, ಮಲ್ಲೇನಹಳ್ಳಿ ಗ್ರಾಮ, ಯಡವನಹಳ್ಳಿ ಅಂಚೆ, ಗಂಡಸಿ ಹೋಬಳಿ, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ.

**ಪ್ರತಿಗಳನ್ನು ಮಾಹಿತಿಗಾಗಿ**:

1. ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
3. ಸರ್ಕಾರದ ಜಂಟಿ ಕಾರ್ಯದರ್ಶಿ (ಗಣಿ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.